ಇಲಾಖಾ ಅಧಿಕಾರಿಗಳು ಆದೇಶಿಸುತ್ತಿದ್ದಾರೆ. ಶಾಲೆ, ಆಸ್ಪತ್ರೆ, ಪೊಲೀಸ್‌ಕಟ್ಟೆ, ಅಂಗನವಾಡಿ, ಸ್ಥಳೀಯ ಸಂಸ್ಥೆಗಳ ಕಟ್ಟಡ ಇತ್ಯಾದಿಗಳಿಗೆ ಭೂಮಿ ಕೇಳಿದಾಗ ಹೇರಳ ಹಣ ನೀಡುವ ಪರಿಸ್ಥಿತಿ ಬಂದಿದೆ ಆದಂದರಿಂದ ತಾಲ್ಲೂಕು ಅಭಿವೃದ್ಧಿ ಮಂಡಳಿ ಮತ್ತು ಗ್ರಾಮ ಪಂಚಾಯಿತಿಗಳಿಗೆ ಮುಫತ್ತಾಗಿ ಭೂಮಿ ನೀಡುತ್ತಿದ್ದಂತೆ ಜಿಲ್ಲಾ ಪರಿಷತ್ತು ಮತ್ತು ಮಂಡಲ ಪಂಚಾಯಿತಿಗಳಿಗೂ ನೀಡಲು ಸೂಕ್ತ ಆದೇಶ ನೀಡಬೇಕಾಗಿ ಸರ್ಕಾರವನ್ನು ಒತ್ತಾಯಿಸುತ್ತೇವೆ.

ಶ್ರೀ ಕೆ.ಹೆಚ್. ಪಾಟೀಲ್ (ಕಂದಾಯ ಹಾಗೂ ಕಾರ್ಮಿಕ ಸಚಿವರು).—ಮಾನ್ಯ ಉಪಾಧ್ಯಕ್ಷರೇ, ಕರ್ನಾಟಕ ಭೂ ಮಂಜೂರಾತಿ ನಿಯಮಗಳು ೧೯೬೯ರ ನಿಯಮ ೨೦ (೧) (ಬಿ)ಪ್ರಕಾರ ಗ್ರಾಮ ಪಂಚಾಯಿತಿ ಮತ್ತು ತಾಲ್ಲೂಕು ಅಭಿವೃದ್ಧಿ ಮಂಡಳಿಗಳಿಗೆ, ಶಾಲಾ ಕಟ್ಟಡಗಳು, ಆಸ್ಪತ್ರೆಗಳು ಹಾಗೂ ಇತರೇ ಸಾರ್ವಜನಿಕ ಉಪಯೋಗಗಳಿಗಾಗಿ ಉಪಯೋಗಿಸಲು ಅನುವಾಗುವಂತೆ ಉಚಿತವಾಗಿ ಸರ್ಕಾರಿ ಜಮೀನನ್ನು ಮಂಜೂರು ಮಾಡಲಾಗುತ್ತಿತ್ತು. ಕರ್ನಾಟಕ ಜಿಲ್ಲಾಪರಿಷತ್ತು, ತಾಲ್ಲೂಕು ಪಂಚಾಯತಿ ಸಮಿತಿ, ಮಂಡಲ್ ಪಂಚಾಯಿತಿ ಮತ್ತು ನ್ಯಾಯ ಪಂಚಾಯಿತಿ ಕಾಯಿದೆ ೧೯೮೩ ಅನುಷ್ಠಾನಕ್ಕೆ ಬಂದ ನಂತರ, ಗ್ರಾಮ ಪಂಚಾಯಿತಿಗಳು ಹಾಗೂ ತಾಲ್ಲೂಕು ಅಭಿವೃದ್ಧಿ ಮಂಡಳಿಗಳು ಅಸ್ತಿತ್ವದಲ್ಲಿರುವುದಿಲ್ಲ. ಆದುದರಿಂದ, ಕರ್ನಾಟಕ ಭೂ ಮಂಜೂರಾತಿ ನಿಯಮಗಳು, ೧೯೬೯ರ ನಿಯಮ ೨೦ (೧) (ಬಿ)ಗೆ ಸೂಕ್ತ ತಿದ್ದುಪಡಿಯನ್ನು ಮಾಡಲು ಈಗಾಗಲೇ ಸೂಕ್ತ ಕ್ರಮವನ್ನು ಕೈಗೊಳ್ಳಲಾಗುತ್ತಿದೆ. ಸದ್ಯದಲ್ಲಿಯೇ ತಿದ್ದುಪಡಿಯನ್ನು ಮಾಡಲಾಗುತ್ತದೆ.

೩. ದಕ್ಷಿಣ ಕನ್ನಡ ಜಿಲ್ಲೆಯ ನರಸಣ್ಣ ಜಾತಿಯನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸಲು ಒತ್ತಾಯ

ಶ್ರೀ ಎ. ರುಕ್ಮಯ್ಯ ಪೂಜಾರಿ (ವಿಟ್ಲ).—ಮಾನ್ಯ ಉಪಾಧ್ಯಕ್ಷಣಿಯವರೇ, ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸುಮಾರು ನೂರರಷ್ಟು ನರಸಣ್ಣ ಅಥವಾ ಪುರುಷ ಕುಟುಂಬಗಳು ವಾಸಿಸುತ್ತಿದ್ದಾರೆ. ಅವರು ಎಲ್ಲಾ ದೃಷ್ಟಿಯಿಂದ ಬಹಳಷ್ಟು ಹಿಂದುಳಿದ ಸರಕಾರದ ಎಲ್ಲಾ ಸವಲತ್ತುಗಳಿಂದ ಕೂಡಾ ವಂಚಿತರಾದ ಕುಟುಂಬದವರಾಗಿದ್ದಾರೆ. ಅವರಲ್ಲಿ ವಿದ್ಯಾವಂತರ ಸಂಖ್ಯೆ ಕಡಿಮೆ ಇದ್ದರೂ ಇವ್ವ ಒಂದಿಬ್ಬರು ವ್ಯಕ್ತಿಗಳಿಗೆ ಸರಕಾರದ ಉದ್ಯೋಗವಕಾಶ ಸಿಕ್ಕಿರುವುದಿಲ್ಲ. ಕಾರಣ ಅವರು ಸರಕಾರದ ಯಾವುದೇ ಜಾತಿಯ ಪಟ್ಟಿಯಲ್ಲಿ ಸೇರಿಲ್ಲ. ಅವರ ಭಾಷೆ ಮರಾಠಿ ಮತ್ತು ಉದ್ಯೋಗ ಜಾಪೆ ಹೆಣೆಯುವುದು, ಊರೂರು ಸುತ್ತಿ ಕಣಿ ಹೇಳುವುದು ಆಗಿರುತ್ತದೆ. ಇದನ್ನೆಲ್ಲಾ ನೋಡುವಾಗ ಈ ನರಸಣ್ಣ ಜಾತಿ ಮತ್ತು ಹಕ್ಕಿಪಿಕ್ಕಿ ಜನಾಂಗಕ್ಕೆ ಸಾಮ್ಯತೆ ಇರುವುದರಿಂದ ಬಹಳ ಹಿಂದೆ ಅವರ ಪೂರ್ವಜರು ದಕ್ಷಿಣ ಕನ್ನಡ ಜಿಲ್ಲೆಗೆ ಬಂದು ನೆಲೆಸಿರಬಹುದೆಂದು ಭಾವಿಸಬಹುದು, ಆದ್ದರಿಂದ ಈ ಜನರು ಸರ್ವತೋಮುಖವಾದ ಅಭಿವೃದ್ಧಿಯನ್ನು ಹೊಂದುವ ದೃಷ್ಟಿಯಿಂದ ಈ ನರಸಣ್ಣ ಜಾತಿಯನ್ನು ಹಕ್ಕಿಪಿಕ್ಕಿ ಜಾತಿ ಅಥವಾ ಹಕ್ಕಿಪಿಕ್ಕಿ ಜಾತಿಯ ಉಪಜಾತಿಯಾಗಿ ಪರಿಗಣಿಸಿ ಪರಿಶಿಷ್ಟ ಪಂಗಡಕ್ಕೆ ಸೇರಿಸಬೇಕಾಗಿ ಸರಕಾರದ ಗಮನಕ್ಕೆ ತರಬಯಸುತ್ತೇನೆ. ಹಕ್ಕಿಪಿಕ್ಕಿ ಜಾತಿ ಪರಿಶಿಷ್ಟ ಪಂಗಡಕ್ಕೆ ಸೇರಿರುತ್ತದೆ.

ಶ್ರೀ ಬಿ. ಶಿವಣ್ಣ (ಸಮಾಜ ಕಲ್ಯಾಣ, ಗಣಿ ಮತ್ತು ಭೂವಿಜ್ಞಾನ ಸಚಿವರು).—ಮಾನ್ಯ ಉಪಾಧ್ಯಕ್ಷಣಿಯವರೇ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಪಟ್ಟಿಯಲ್ಲಿ ಯಾವುದೇ ಜಾತಿಯನ್ನು ಸೇರಿಸುವ ಹಾಗೂ ತೆಗೆಯುವ ಅಧಿಕಾರ ರಾಜ್ಯ ಸರ್ಕಾರದ ವ್ಯಾಪ್ತಿಗೆ ಬರುವುದಿಲ್ಲ. ಇದು ಕೇಂದ್ರ ಸರ್ಕಾರದ ವ್ಯಾಪ್ತಿಗೆ ಬರುತ್ತದೆ.

ತಮ್ಮನ್ನು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದಲ್ಲಿ ಸೇರಿಸುವಂತೆ ಕೋರಿ ಈಗಾಗಲೇ ಹಲವಾರು ಜಾತಿಗಳವರ ಮನವಿಗಳು ಸರ್ಕಾರಕ್ಕೆ ಬಂದಿರುತ್ತವೆ. ಇವುಗಳೊಂದಿಗೆ ನರಸಣ್ಣ ಜಾತಿಯವರ ಮನವಿಯೂ ಸಹ ಬಂದಿದ್ದು ಇಂತಹ ಮನವಿಗಳನ್ನು ಪರಿಶೀಲಿಸಿ ವರದಿ ಸಲ್ಲಿಸಲು ದಿನಾಂಕ ೫-೧-೯೦ರಲ್ಲಿ ಸಮಿತಿಯೊಂದನ್ನು ರಚಿಸಲಾಗಿದೆ. ಸದರಿ ಸಮಿತಿಯು ನೀಡುವ ವರದಿಯನ್ನು ಪರಿಶೀಲಿಸಿ ಅಗತ್ಯಬಿದ್ದರೆ ಭಾರತಸರ್ಕಾರಕ್ಕೆ ಸೂಕ್ತವಾದ ಶಿಫಾರಸ್ಸು ಮಾಡಲಾಗುವುದು.